# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## *ವಾರ್ಡ್ ಸಂಖ್ಯೆ.27 ಬಾಣಸವಾಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ಕಛೇರಿಯ ಸಭಾಂಗಣದಲ್ಲಿ ದಿನಾಂಕ: 08-08-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು*

**ಹಾಜರಿದ್ದ ಸದಸ್ಯರು,**

1. ಶ್ರೀ ವಿನೋದ್, ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಶ್ರೀಕಾಂತ್.ಕೆ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶ್ರೀ ಸಂದೀಪ್.ಎಸ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ.27
4. ಶ್ರೀ ಶ್ರೀಧರ್, ಸ್ಥಳೀಯರು, ಬಾಣಸವಾಡಿ,
5. ಶ್ರೀಮತಿ ಅಂಜು ಮಿನಾಸ್, ಸ್ಥಳೀಯರು, ಬಾಣಸವಾಡಿ,
6. ಶ್ರೀ ಅಮಿತ್ ನಿಗ್ಲಿ, ಸ್ಥಳೀಯರು, ಬಾಣಸವಾಡಿ,
7. ಶ್ರೀ ಸಾಶ್ಯ ರಮೇಶ್, ಸ್ಥಳೀಯರು, ಬಾಣಸವಾಡಿ,
8. ಶ್ರೀ ಪ್ರಶಾಂತ್ ಬಿ.ಆರ್, ಸ್ಥಳೀಯರು, ಬಾಣಸವಾಡಿ,
9. ಶ್ರೀ ಚಂದ್ರ ಲಿಂಗಮ್, ಸ್ಥಳೀಯರು, ಬಾಣಸವಾಡಿ,
10. ಶ್ರೀ ಅಶ್ವಥ್‌ನಾರಾಯಣ, ಸ್ಥಳೀಯರು, ಬಾಣಸವಾಡಿ,
11. ಶ್ರೀ ಶರತ್, ಸ್ಥಳೀಯರು, ಬಾಣಸವಾಡಿ,

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ಎನ್.ಸಿ ಸುಧೀಂದ್ರ, ಕಂದಾಯ ಪರಿವೀಕ್ಷಕರು,
2. ಡಾ॥ ರೇಚಲ್ ಎಸ್ ಡ್ಯಾನಿಯಲ್, ಆರೋಗ್ಯ ವೈದ್ಯಾಧಿಕಾರಿಗಳು
3. ಶ್ರೀ ಕೆ.ಶಿವಯ್ಯ, ಕೆಲಸ ಪರಿವೀಕ್ಷಕರು,
4. ಶ್ರೀ ಕೆ.ಜಿ ರವಿ, ಅಸ್ಸೆಸರ್, ಬಾಣಸವಾಡಿ

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು, ಮಾಜಿ ಪಾಲಿಕೆ ಸದಸ್ಯರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

| ಕ್ರಸಂ | ಚರ್ಚಿಸಿದ ವಿಷಯಗಳು | ಸಂಬಂಧಪಟ್ಟ ಇಲಾಖೆ |
|---|---|---|
| 1 | 8ನೇ ಎ, ಬಿ ಮತ್ತು 2ನೇ ಡಿ ಅಡ್ಡರಸ್ತೆ, ಹೆಚ್.ಆರ್.ಬಿ.ಆರ್ ಬಡಾವಣೆಯಯ ನಿವಾಸಿಗಳು ಮಾತನಾಡಿ, ಕೆಲವು ಪ್ರದೇಶಗಳಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ನಿಗಮದಿಂದ ಅಳವಡಿಸಿರುವ ಚೇಂಬರ್ ತುಂಬಿ ನೀರು ಹೊರಗಡೆ ಬರುತ್ತಿದ್ದು ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಇದನ್ನು ಕೂಡಲೇ ಸರಿಪಡಿಸಲು ಸಭೆಗೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಸಹಾಯಕ ಅಭಿಯಂತರರು<br>**AEE/AE- BWSSB** |

| | | |
|---|---|---|
| 2 | ಬಾಣಸವಾಡಿ ವ್ಯಾಪ್ತಿಯ ಹೆಚ್.ಆರ್.ಬಿ.ಆರ್ ಬಡಾವಣೆ Jai gopal garodia school ಯಿಂದ ಬೃಹತ್ ನೀರುಗಾಲುವೆ ವರೆಗೆ ತ್ಯಾಜ್ಯ ನೀರಿನ ನಿರ್ವಹಣೆ ರವರು ಪೈಪ್‌ಲೈನ್ ಅಳವಡಿಸಿದ್ದು, ಇದರಿಂದ ಸದರಿ ಪ್ರದೇಶದಲ್ಲಿ ಮಳೆ ನೀರು ಶೇಖರಣೆಯಾಗುತ್ತಿದ್ದು, ಸದರಿ ಪೈಪ್‌ಲೈನ್ ಅನ್ನು ಕೂಡಲೇ ಸ್ಥಳಾಂತರಿಸಲು ಸಭೆಗೆ ಪ್ರಸ್ತಾಪಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಸಹಾಯಕ ಅಭಿಯಂತರರು<br>**AEE/AE- WWM** |
| 3 | ಬಾಣಸವಾಡಿ ವ್ಯಾಪ್ತಿಯ 3ನೇ ಅಡ್ಡರಸ್ತೆ, ಗಣೇಶ ದೇವಸ್ಥಾನದ ಹತ್ತಿರ ಬೃಹತ್ ನೀರು ಗಾಲುವೆಯಲ್ಲಿ ಹೂಳು ತುಂಬಿದ್ದು, ಇದರಿಂದ ನೀರು ಶೇಖರಣೆಯಾಗಿ, ಸೊಳ್ಳೆ ಹಾಗೂ ಹುಳುಗಳ ಕಾಟ ಹೆಚ್ಚಾಗಿದ್ದು, ಮಳೆ ನೀರು ಹಾಗೂ ಚರಂಡಿ ನೀರು ಸರಾಗವಾಗಿ ಹರಿಯಲು ಅನುವು ಮಾಡಿಕೊಡಲು ಸಭೆಗೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಸಹಾಯಕ ಅಭಿಯಂತರರು<br>**AEE/AE- SWD** |
| 4 | ಶ್ರೀ ಅಮಿತ್ ನಿಗ್ಲಿ, ಸ್ಥಳೀಯರು, ಬಾಣಸವಾಡಿ ರವರು ಮಾತನಾಡಿ, 8ನೇ ಮುಖ್ಯರಸ್ತೆ ಹೆಚ್.ಆರ್.ಬಿ.ಆರ್ ಬಡಾವಣೆಯಲ್ಲಿ ಡೆಬ್ರೀಸ್ ಹಾಗೂ ಸಿಲ್ಟ್ ಸುಮಾರು ದಿನಗಳಿಂದ ಬಿದ್ದಿದ್ದು, ಅದನ್ನು ತೆರವುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದರು. | ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಈ ಪ್ರದೇಶದಲ್ಲಿ ಸಿಲ್ಟ್ ತೆರವುಗೊಳಿಸಲು ಅಮೃತ್ ನಗರೋತ್ಥಾನ ಅನುದಾನದ ಅಡಿಯಲ್ಲಿ ತೆಗೆದುಕೊಳ್ಳಲಾಗಿದ್ದು, ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಅತೀ ಶೀಘ್ರವಾಗಿ ಸಿಲ್ಟ್ ತೆರವುಗೊಳಿಸಲಾಗುವುದೆಂದು ಸಭೆಗೆ ತಿಳಿಸಲಾಯಿತು. |
| 5 | ಶ್ರೀ ಅಮಿತ್ ನಿಗ್ಲಿ, ಸ್ಥಳೀಯರು, ಬಾಣಸವಾಡಿ ರವರು ಮಾತನಾಡಿ, 1ನೇ ಬಿ ಅಡ್ಡರಸ್ತೆ, ಹೆಚ್.ಆರ್.ಬಿ.ಆರ್ ಲೇಔಟ್ ನಿಂದ ಬೃಹತ್ ನೀರುಗಾಲುವೆ ವರೆಗೆ ಸರ್ವೆ ನಂ.211 ವ್ಯಾಪ್ತಿಯಲ್ಲಿ ಹೊಸದಾಗಿ ಚರಂಡಿ ನಿರ್ಮಾಣ ಮಾಡಲು ಸಭೆಯಲ್ಲಿ ಪ್ರಸ್ತಾಪಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಸಹಾಯಕ ಅಭಿಯಂತರರು<br>**AEE/AE- SWD** |
| 6 | ಶ್ರೀ ಅಮಿತ್ ನಿಗ್ಲಿ, ಸ್ಥಳೀಯರು, ಬಾಣಸವಾಡಿ ರವರು ಮಾತನಾಡಿ 4ನೇ ಮುಖ್ಯರಸ್ತೆಯ ಓ.ಎಂ.ಬಿ.ಆರ್ ಲೇಔಟ್‌ನಲ್ಲಿ ಡಿ-ಸಿಲ್ಟ್ ಮಾಡಲು ಸಭೆಯಲ್ಲಿ ಪ್ರಸ್ತಾಪಿಸಿದರು. | ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಈ ಪ್ರದೇಶದಲ್ಲಿ ಸಿಲ್ಟ್ ತೆರವುಗೊಳಿಸಲು 2022-23ನೇ ಸಾಲಿನ Flood Preventive and Protective works ಅನುದಾನದಲ್ಲಿ ತೆಗೆದುಕೊಳ್ಳಲಾಗಿದ್ದು, ಕಾರ್ಯಾದೇಶದ ಹಂತದಲ್ಲಿದ್ದು, ಅತೀ ಶೀಘ್ರವಾಗಿ ಡಿ ಸಿಲ್ಟ್ ತೆರವು ಕಾಮಗಾರಿಯನ್ನು ಕೈಗೊಳ್ಳುವುದಾಗಿ ಸಭೆಗೆ ತಿಳಿಸಲಾಯಿತು. |
| 7 | ಸ್ಥಳೀಯರು, ಬಾಣಸವಾಡಿ ರವರು ಮಾತನಾಡಿ 1ನೇ ಬಿ ಅಡ್ಡರಸ್ತೆ ಹಾಗೂ 1ನೇ ಸಿ ಅಡ್ಡರಸ್ತೆ, ಹೆಚ್.ಆರ್.ಬಿ.ಆರ್ ಲೇಔಟ್, 1ನೇ ಬ್ಲಾಕ್‌ನಲ್ಲಿ ಡಿ-ಸಿಲ್ಟ್ ಹಾಗೂ ಡಾಂಬರು ರಸ್ತೆ ನಿರ್ಮಾಣ ಮಾಡಲು ಸಭೆಯಲ್ಲಿ ಪ್ರಸ್ತಾಪಿಸಿದರು. | ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಈ ಪ್ರದೇಶದಲ್ಲಿ ಸಿಲ್ಟ್ ತೆರವುಗೊಳಿಸಲು ಅಮೃತ್ ನಗರೋತ್ಥಾನ ಅನುದಾನದ ಅಡಿಯಲ್ಲಿ ತೆಗೆದುಕೊಳ್ಳಲಾಗಿದ್ದು, ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಅತೀ ಶೀಘ್ರವಾಗಿ ಸಿಲ್ಟ್ ತೆರವುಗೊಳಿಸಲಾಗುವುದೆಂದು ಸಭೆಗೆ ತಿಳಿಸಲಾಯಿತು. |
| 8 | ಸ್ಥಳೀಯರು, ಬಾಣಸವಾಡಿ ರವರು ಮಾತನಾಡಿ 1ನೇ ಬಿ ಅಡ್ಡರಸ್ತೆ ಹೆಚ್.ಆರ್.ಬಿ.ಆರ್ ಲೇಔಟ್, 1ನೇ ಬ್ಲಾಕ್‌ನಲ್ಲಿ ಹಳೆಯ ವಾಹನಗಳನ್ನು ಸುಮಾರು 06 ತಿಂಗಳಿನಿಂದ ನಿಲುಗಡೆ ಮಾಡಿದ್ದು, ಇದರಿಂದ ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಅವುಗಳನ್ನು ಕೂಡಲೇ ಸದರಿ ಸ್ಥಳದಿಂದ ಸ್ಥಳಾಂತರಿಸಲು ಸಭೆಯಲ್ಲಿ ಪ್ರಸ್ತಾಪಿಸಿದರು. | **Banasawadi Police Station**<br>**(Traffic Department)** |

| | | |
|---|---|---|
| | ಸ್ಥಳೀಯರು, ಬಾಣಸವಾಡಿ ರವರು ಮಾತನಾಡಿ 9ನೇ ಮುಖ್ಯರಸ್ತೆ ಹಾಗೂ 1ನೇ ಬಿ ಅಡ್ಡರಸ್ತೆಯ ಸರ್ವೆ ನಂ.211 ನಿವೇಶನದ ಮೂಲೆಯಲ್ಲಿ ಪ್ರತಿ ವರ್ಷ ಗಣೇಶ ವಿಸರ್ಜನೆಗೆ ತಾತ್ಕಾಲಿಕ ಹೊಂಡವನ್ನು ನಿರ್ಮಿಸಿ, ಗಣೇಶ ವಿಸರ್ಜನೆ ಮಾಡುತ್ತಿರುವುದರಿಂದ, ಸದರಿ ಸ್ಥಳದಲ್ಲಿ ಹೂ, ಬಾಳೆದಿಂಡು ಹಾಗೂ ಇತರೆ ತ್ಯಾಜ್ಯವನ್ನು ಅಲ್ಲೇ ಬಿಸಾಡಿ ಹೋಗುತ್ತಿರುವುದರಿಂದ ಸ್ಥಳೀಯರಿಗೆ ತೊಂದರೆಯಾಗುತ್ತಿದ್ದು, ಈ ವರ್ಷ ಇದಕ್ಕೆ ಅವಕಾಶ ನೀಡಬಾರದೆಂದು ಸಭೆಗೆ ತಿಳಿಸಿದರು. | ಸದರಿ ವಿಷಯಕ್ಕೆ ಸಂಬಂಧಿಸಿದಂತೆ ನೋಡಲ್ ಅಧಿಕಾರಿಗಳು ಮಾತನಾಡಿ ಸದರಿ ಪ್ರದೇಶದಲ್ಲಿ ಪಾಲಿಕೆ ವತಿಯಿಂದ Mobile Immersion Tanker ಅಳವಡಿಸಿಕೊಂಡು ಗಣೇಶ ವಿಸರ್ಜನೆ ಕಾರ್ಯವನ್ನು ನಿರ್ವಹಿಸಲು ಕಾಮಗಾರಿ ಇಲಾಖೆಯ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು. |
| 10 | ಶ್ರೀಮತಿ ಅಂಜು ಮಿನಾಸ್, ಸ್ಥಳೀಯರು, ಬಾಣಸವಾಡಿ, ರವರು ಮಾತನಾಡಿ 3ನೇ ಬಿ ಅಡ್ಡರಸ್ತೆ, ಓ.ಎಂ.ಬಿ.ಆರ್ ಲೇಔಟ್‌ನ ಅಡ್ಡರಸ್ತೆ ಹಾಗೂ ಪ್ರಮುಖ ರಸ್ತೆಗಳಲ್ಲಿ ಕಸ ಹಾಗೂ ತ್ಯಾಜ್ಯವನ್ನು ಸರಿಯಾಗಿ ಸಂಗ್ರಹಣೆ ಮತ್ತು ವಿಲೇವಾರಿ ಕಾರ್ಯವನ್ನು ನಿರ್ವಹಿಸದೇ ಇರುವುದರಿಂದ ಇತ್ತೀಚೆಗೆ ಬಿದ್ದ ಭಾರಿ ಮಳೆಯಿಂದ ಮನೆಯ ಮುಂಭಾಗದಲ್ಲಿ ಬಂದು ಶೇಖರಣೆಯಾಗುತ್ತಿದ್ದು, 3ನೇ ಬಿ ಅಡ್ಡರಸ್ತೆ, ಓ.ಎಂ.ಬಿ.ಆರ್ ಲೇಔಟ್‌ನ ಅಡ್ಡರಸ್ತೆಯಲ್ಲಿ ದಿನನಿತ್ಯ ಕಸ ಸಂಗ್ರಹಣೆ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಲು ಸಭೆಗೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು<br>**AEE – SWM**<br>ಈ ಬಗ್ಗೆ ವಾರ್ಡಿನ ಕಿರಿಯ ಆರೋಗ್ಯ ನಿರೀಕ್ಷರು ರವರು ಸಂಗ್ರಹಣೆ ಮತ್ತು ವಿಲೇವಾರಿ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಲು ಸೂಚಿಸಿದರು. |

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಗೆ ಗೈರು ಹಾಜರಾಗಿರುವ ಬೃಹತ್ ನೀರುಗಾಲುವೆ, ಬೆಸ್ಕಾಂ, ತ್ಯಾಜ್ಯ ನೀರಿನ ನಿರ್ವಹಣೆ, ಸಂಚಾರಿ ಪೊಲೀಸ್, ಬಾಣಸವಾಡಿ ರವರುಗಳು ಕಡ್ಡಾಯವಾಗಿ ಮುಂದಿನ ಸಭೆಗೆ ಹಾಜರಿರಲು ಕ್ರಮ ವಹಿಸಲು ಸೂಚಿಸಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

10/8/2022

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.27, ಬಾಣಸವಾಡಿ

10/8/22

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.27, ಬಾಣಸವಾಡಿ

<u>ಪ್ರತಿಯನ್ನು</u>

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.